# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 595

ಸದಸ್ಯರ ಹೆಸರು : ಡಾ. ಚಂದ್ರಶೇಖರ್ ಬಿ. ಪಾಟೀಲ್ (ಪದವೀಧರರ ಕ್ಷೇತ್ರ)

ಉತ್ತರಿಸಬೇಕಾದ ದಿನಾಂಕ : 04/03/2021.

ಉತ್ತರಿಸುವ ಸಚಿವರು : ಮಾನ್ಯ ಮುಖ್ಯಮಂತ್ರಿಯವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕರ್ನಾಟಕ ಲೋಕಸೇವಾ ಆಯೋಗದ ಭ್ರಷ್ಟ ಮತ್ತು ಜನವಿರೋಧಿ ಕಾರ್ಯವೈಖರಿಯು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ ಅದನ್ನು ಸರಿಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ; | ಕರ್ನಾಟಕ ಲೋಕಸೇವಾ ಆಯೋಗದ ಸುಧಾರಣೆ ಗಾಗಿ ರಚಿಸಲಾಗಿದ್ದ ಹೋಟಾ ಸಮಿತಿಯು ನೀಡಿದ್ದ ಸೂಕ್ತ ಶಿಫಾರಸ್ಸುಗಳನ್ನು ಅಳವಡಿಸಿಕೊಳ್ಳಲಾಗಿದೆ. |
| ಆ) | ರಾಜ್ಯದ ವಿವಿಧ ಜಿಲ್ಲೆಗಳಿಂದ ವಿವಿಧ ಸಮಸ್ಯೆಗಳನ್ನು ಹೊತ್ತು ಕರ್ನಾಟಕ ಲೋಕಸೇವಾ ಆಯೋಗ ಕಾರ್ಯಾಲಯಕ್ಕೆ ಬರುವ ಅಭ್ಯರ್ಥಿಗಳಿಗೆ/ಪದವೀಧರರಿಗೆ ಸ್ಪಂದಿಸಲು ಯಾವುದೇ ವ್ಯವಸ್ಥೆ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಈ ಬಗ್ಗೆ ಕೈಗೊಂಡ ಕ್ರಮಗಳೇನು ; | ಕರ್ನಾಟಕ ಲೋಕಸೇವಾ ಆಯೋಗವು ಒಂದು ಸಂವಿಧಾನಾತ್ಮಕ ಸಂಸ್ಥೆಯಾಗಿದ್ದು, ರಾಜ್ಯದ ನಾಗರಿಕ ಸೇವೆಯ ವಿವಿಧ ವೃಂದದ ಹುದ್ದೆಗಳಿಗೆ ನೇಮಕಾತಿ ಪ್ರಕ್ರಿಯೆಯನ್ನು ನಡೆಸುತ್ತಿದ್ದು, ಸ್ಪರ್ಧಾತ್ಮಕ ಪರೀಕ್ಷೆ, ಬರೆದು ಮೂಲ ದಾಖಲೆಗಳ ಪರಿಶೀಲನ /ಸಂದರ್ಶನಕ್ಕೆ ಅರ್ಹರಾಗುವ ಅಭ್ಯರ್ಥಿಗಳನ್ನು ಮಾತ್ರ ಆಯೋಗದ ಕಛೇರಿಗೆ ಆಹ್ವಾನಿಸಲಾಗುತ್ತಿದ್ದು, ಅಂತಹ ಅಭ್ಯರ್ಥಿಗಳಿಗೆ ಜಾರಿ ಮಾಡಲಾಗುವ ಸೂಚನಾ ಪತ್ರದಲ್ಲಿ ನಿಗದಿತ ದಿನಾಂಕ ಮತ್ತು ಸಮಯವನ್ನು ನಮೂದಿಸಲಾಗುತ್ತದೆ. ಅಲ್ಲದೇ ಈ ವಿವರಗಳನ್ನು ಆಯೋಗದ ವೆಬ್‌ಸೈಟ್ ನಲ್ಲಿಯೂ ಸಹ ಪ್ರಕಟಿಸಲಾಗುತ್ತದೆ. ಅದರಂತೆ ನಿಗದಿತ ಸಮಯಕ್ಕೆ ಸರಿಯಾಗಿ ಅಭ್ಯರ್ಥಿಗಳಿಗೆ ಆಯೋಗದ ಕಛೇರಿಯ ಒಳಗಡೆ ಪ್ರವೇಶಿಸಲು ಅನುಮತಿಸಲಾಗುತ್ತದೆ.<br>ಇನ್ನುಳಿದಂತೆ ಸಾರ್ವಜನಿಕರ /ಅಭ್ಯರ್ಥಿಗಳ ಕುಂದುಕೊರತೆಗಳನ್ನು ನಿವಾರಿಸುವ ಸಲುವಾಗಿ ಆಯೋಗದ ಕಛೇರಿಯ ಮುಂಭಾಗದಲ್ಲಿ ಕಿಯೋಸ್ಕ್ ಒಂದನ್ನು ಸ್ಥಾಪಿಸಿ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ. ಇದಲ್ಲದೇ ಕಛೇರಿಯಲ್ಲಿ ಮಾಹಿತಿ ಕೇಂದ್ರವಿದ್ದು ಇಲ್ಲಿ ದೂರವಾಣಿ ಮುಖಾಂತರ ಅಭ್ಯರ್ಥಿಗಳಿಂದ ಸ್ವೀಕೃತವಾಗುವ ಕರೆಗಳಿಗೆ ಉತ್ತರಿಸಲು ಮತ್ತು ಮಾಹಿತಿಯನ್ನು ನೀಡಲು ಸಿಬ್ಬಂದಿಯನ್ನು ಸಹ ನಿಯೋಜಿಸಲಾಗಿರುತ್ತದೆ.<br>ಆಯೋಗದ ಪ್ರತಿಯೊಂದು ನೇಮಕಾತಿಗಳಿಗೆ ಸಂಬಂಧಿಸಿದ ಪ್ರಕ್ರಿಯೆಗಳ ಪ್ರತಿ ಹಂತದ ಮಾಹಿತಿಯನ್ನು ಅಭ್ಯರ್ಥಿಗಳ ಅನುಕೂಲಕ್ಕಾಗಿ ಆಯೋಗದ ವೆಬ್‌ಸೈಟ್ ನಲ್ಲಿ ಬಿತ್ತರಿಸಲಾಗುತ್ತಿದೆ |
| ಇ) | ಸಾರ್ವಜನಿಕ ಕುಂದುಕೊರತೆಗಳನ್ನು ಬಗೆಹರಿಸಲು ಕರ್ನಾಟಕ ಲೋಕಸೇವಾ ಆಯೋಗ ವಿಫಲವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದನ್ನು ಸರಿಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ; | |

| | | |
|---|---|---|
| | | ಮತ್ತು ಈ ಬಗ್ಗೆ ಪತ್ರಿಕಾ ಪ್ರಕಟಣೆಯನ್ನೂ ಸಹ ಕಾಲಕಾಲಕ್ಕೆ ಹೊರಡಿಸಲಾಗುತ್ತದೆ. |
| ಈ) | ಕರ್ನಾಟಕ ಲೋಕಸೇವಾ ಆಯೋಗಕ್ಕೆ ಸಾರ್ವಜನಿಕರ ಪ್ರವೇಶವನ್ನು ನಿರ್ಬಂಧಿಸಿದೆಯೇ ; ನಿರ್ಬಂಧಿಸಿದ್ದಲ್ಲಿ ಅದಕ್ಕೆ ಕಾರಣವೇನು ; | ಕರ್ನಾಟಕ ಲೋಕಸೇವಾ ಆಯೋಗವು ರಾಜ್ಯದ ನಾಗರಿಕ ಸೇವೆಗಳಿಗೆ ಅಭ್ಯರ್ಥಿಗಳನ್ನು ಆಯ್ಕೆ ಮಾಡುವ ಮಹತ್ತರ ಕಾರ್ಯವನ್ನು ನಿರ್ವಹಿಸುತ್ತಿದ್ದು, ಈ ಕಾರ್ಯವು ತುಂಬಾ ಸೂಕ್ಷ್ಮತೆಯಿಂದ ಕೂಡಿರುತ್ತದೆ. ಕರ್ನಾಟಕ ರಾಜ್ಯ ಸೇವೆಗಳಲ್ಲಿನ ಹುದ್ದೆಗಳಿಗೆ ಮತ್ತು ಸೇವೆಗಳಿಗೆ ಆಯ್ಕೆ ಮಾಡುವಲ್ಲಿ, ಮುಕ್ತ, ನಿಷ್ಪಕ್ಷಪಾತವಾದ ಮತ್ತು ಅರ್ಹತೆ ಆಧಾರಿತ ಆಯ್ಕೆಗಳನ್ನು ಮಾಡಲು ಕರ್ನಾಟಕ ಲೋಕಸೇವಾ ಆಯೋಗದಲ್ಲಿ ಜಾರಿಯಲ್ಲಿರುವ ವ್ಯವಸ್ಥೆ ಮತ್ತು ಪ್ರಕ್ರಿಯೆಗಳನ್ನು ಪರಿಷ್ಕರಿಸುವ ಉದ್ದೇಶದಿಂದ ಕರ್ನಾಟಕ ಸರ್ಕಾರವು ರಚಿಸಿದ್ದ ಪಿ.ಸಿ. ಹೋಟಾ ಸಮಿತಿಯ ಶಿಫಾರಸ್ಸಿನ ಮೇರೆಗೆ ಭದ್ರತೆಯ ದೃಷ್ಟಿಯಿಂದ ಅಗತ್ಯತೆಯನುಸಾರ ಸಂಬಂಧಿತ ಅಭ್ಯರ್ಥಿಗಳನ್ನು ಹೊರತುಪಡಿಸಿ ಉಳಿದವರಿಗೆ ಆಯೋಗದ ಕಛೇರಿಯ ಆವರಣದೊಳಗಡೆ ಪ್ರವೇಶವನ್ನು ನಿರ್ಬಂಧಿಸಲಾಗಿರುತ್ತದೆ. |
| ಉ) | ಕರ್ನಾಟಕ ಲೋಕಸೇವಾ ಆಯೋಗ ಕಛೇರಿ ಒಳಗಡೆ ಬಿಡದಿರಲು ಕಾರಣವಾದ ಸಮಸ್ಯೆಗಳಿಗೆ ಸಮಾಧಾನ ಕಂಡುಕೊಳ್ಳುವ ವ್ಯವಸ್ಥೆ/ವಿಧಾನವೇನು;(ವಿವರ ನೀಡುವುದು) | |
| ಊ) | ಕಳೆದ ಎರಡು ವರ್ಷಗಳಲ್ಲಿ ಕರ್ನಾಟಕ ಲೋಕಸೇವಾ ಆಯೋಗ ಕಛೇರಿಗೆ ಭೇಟಿ ನೀಡಿದ ಬಗ್ಗೆ visitor's dairy ಇಡಲಾಗಿದೆಯೇ ; ಇಟ್ಟಿದ್ದಲ್ಲಿ, ಸದರಿ ಡೈರಿಯ ದೃಢೀಕರಣ ನಕಲು ಪ್ರತಿ ನೀಡುವುದು. | ಕರ್ನಾಟಕ ಲೋಕ ಸೇವಾ ಆಯೋಗದ ಕಛೇರಿಗೆ ಭೇಟಿ ನೀಡುವವರ ಬಗ್ಗೆ Visitor's Dairy ಯನ್ನು ಇಡಲಾಗಿದೆ.<br><br>ಮುಂದುವರೆದು, ಸದರಿ Visitor's Dairy ಯಲ್ಲಿಯೇ ಆಯೋಗದ ಗೋಪ್ಯ ಕಾರ್ಯಗಳಾದ ಪ್ರಶ್ನೆ ಪತ್ರಿಕೆ ಸಿದ್ಧಪಡಿಸುವ ವಿಷಯ ತಜ್ಞರು/ ಭಾಷಾಂತರಕಾರರು/ ಮೌಲ್ಯ ಮಾಪಕರು ಮತ್ತು ಸ್ಕ್ಯಾನಿಂಗ್ ಸಿಬ್ಬಂದಿಗಳ ಹೆಸರು, ದೂರವಾಣಿ ಸಂಖ್ಯೆ ವಿಳಾಸವನ್ನೆಲ್ಲಾ ನಮೂದಿಸಿದ್ದು, ಇದು ಗೋಪ್ಯ ಮಾಹಿತಿಯಾಗಿರುವುದರಿಂದ Visitor's Dairy ಯನ್ನು ನೀಡಲು ಸಾಧ್ಯವಾಗುವುದಿಲ್ಲ. |

**ಸಂಖ್ಯೆ: ಸಿಆಸುಇ 52 ಎಸ್‌ಎಲ್‌ಎ 2021**

ಸಿದ್ದರಾಮಯ್ಯ
ಮುಖ್ಯಮಂತ್ರಿ